# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

---

### ವಾರ್ಡ್ ನಂ.70 : ರಾಜಗೋಪಾಲ ನಗರ

---

**ದಿನಾಂಕ: 14.09.2021 ರಂದು ಮಧ್ಯಾಹ್ನ 3.00 ಗಂಟೆಗೆ ಶ್ರೀಮತಿ ಹೆಚ್.ಕಮಲ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಹೆಚ್.ಕಮಲ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಡಾ.ನಿಹಾಲ್ ಅಬ್ಬಾಸ್ | ಆರೋಗ್ಯ ವೈದ್ಯಾಧಿಕಾರಿ |
| 4 | ಎನ್ ವೆಂಕಟೇಶ್ | ಕಂದಾಯ ಮೌಲ್ಯಮಾಪಕರು |
| 5 | ಟಿ ಶೇಖರ್ | ಕಂದಾಯ ಪರಿವೀಕ್ಷಕರು |
| 6 | ಸ್ವಾಮಿ ಎಸ್ ಆರ್ | ಕಿರಿಯ ಆರೋಗ್ಯ ಪರಿವೀಕ್ಷಕರು– ವಾರ್ಡ್ 70 |
| 7 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು,ವಾರ್ಡ್ ನಂ.70 |
| 8 | ನಾಗೇಶ್ ವಿ | ಗುತ್ತಿಗೆದಾರರು– ಘನ ತ್ಯಾಜ್ಯ & ನಿರ್ವಹಣೆ |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ವಿಷಯ ಸಂಖ್ಯೆ:1**

  **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2021–22ನೇ ಸಾಲಿನ ಆಯವ್ಯಯದಲ್ಲಿ ನಿರ್ವಹಣೆ ಮತ್ತು ಅಭಿವೃದ್ಧಿಯ ಹೊಸ ಕಾಮಗಾರಿಗಳಿಗೆ ಮೀಸಲಿಟ್ಟಿರುವ ಅನುದಾನದಲ್ಲಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ.**

ವಾರ್ಡ್ 70ರ ಸಹಾಯಕ ಅಭಿಯಂತರರು ಮಾತನಾಡಿ, ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ: ಮುಅ/ಪಿಆರ್/1113/2021–22, ದಿನಾಂಕ: 26/07/2021ರ ಮತ್ತು ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗರವರ ಕಛೇರಿ ಆದೇಶ ಸಂಖ್ಯೆ:ಬಿಬಿಎಂಪಿ/ದಾ.ವಿ/ಕಾ.ಅ/ಪಿಆರ್/370/2021–22 ದಿನಾಂಕ:04/08/2021 ಆದೇಶದಲ್ಲಿ ದಾಸರಹಳ್ಳಿ ವಲಯ, ಮುಖ್ಯ ಅಭಿಯಂತರರು ರವರಿಗೆ ಬಿಡುಗಡೆ ಆಗಿರುವ ಅನುದಾನದಲ್ಲಿ ಕ್ರಮ ಸಂಖ್ಯೆ 16ಕ್ಕೆ ಸಂಬಂಧಪಟ್ಟಂತೆ {Budget Code: 05-220610, Zonal Public Works – POW Works – 60% for Annual Maintenance and Re asphalting of roads in Ward

Jurisdiction – ESCROW Account- P3726 (Work demanded by citizens)} ಪ್ರತಿ ವಾರ್ಡ್‌ಗೆ ರೂ.20.00 ಲಕ್ಷಗಳನ್ನು ಪಾದಚಾರಿ ರಸ್ತೆ ದುರಸ್ಥಿ ಮತ್ತು ನಿರ್ವಹಣೆಗೆ, ರಸ್ತೆ ಗುಂಡಿ ಮುಚ್ಚುವ ಕಾಮಗಾರಿಗೆ ರೂ.20.00 ಲಕ್ಷಗಳು ಹಾಗೂ ಉಳಿದ ರೂ 35.25 ಲಕ್ಷಗಳನ್ನು ಇತರೆ ಕಾಮಗಾರಿಗಳಿಗೆ ನಿಗದಿಪಡಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು. ಈ ವಿಚಾರವಾಗಿ ಚರ್ಚಿಸಲಾಗಿ ಸದರಿ ಅನುದಾನದಲ್ಲಿ ವಾರ್ಡ್ 70, ರಾಜಗೋಪಾಲನಗರಕ್ಕೆ ಬಿಡುಗಡೆ ಆಗಿರುವ ಅನುದಾನದಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಜಾಬ್ ಕೋಡ್ ದೊರಕಿಸಿ ಕೊಡಲು ಹಾಗೂ ಅನುಮೋದನೆಗೆ ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು.

| Sl. No. | Budget Code | P Code | Name of Work | Estimated Cost (Rs.in Lakhs) |
|---|---|---|---|---|
| 1 | 05-220610 | P3726 | Footpath Maintenance and desilting of drains, removal of debris & providing Covering Slabs for Damaged Portions in Ward no.70, Rajgopalanagara | 20.00 |
| 2 | 05-220610 | P3726 | Filling Pot holes in Ward No.70, Rajagopala Nagara | 20.00 |
| 3 | 05-220610 | P3726 | Desilting of drains, removal of debris & providing Covering Slabs for Damaged Portions in Srigandhanagara 5th cross, Rajagopalanagara cross roads, Karimsab layout & surrounding areas in Ward no.70, Rajgopalanagara & Supplying & fixing computer, printer & partition to Hegganahalli sub division office. | 15.25 |
| 4 | 05-220610 | P3726 | Providing & fixing of name boards in Ward no.70, Rajgopalanagara | 20.00 |
| | | | **TOTAL** | **75.25** |

- <u>ವಿಷಯ ಸಂಖ್ಯೆ: 2:</u> ವಾರ್ಡ್ 70ರ ವ್ಯಾಪ್ತಿಯ ಟ್ರಯಾಜ್ ರೂಂ ಸೆಂಟರ್ ಬಿಲ್ ಪಾವತಿಸುವ ಬಗ್ಗೆ

ನಾಗೇಶ್ ವಿ, ಗುತ್ತಿಗೆದಾರರು ಇವರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಟ್ರಯಾಜ್ ರೂಂಗೆ ಅವಶ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಿದ್ದು, ಅದರ ಬಿಲ್ಲನ್ನು ಪಾವತಿಸಲು ನೋಡಲ್ ಅಧಿಕಾರಿ ಹಾಗೂ ಸಹಾಯಕ ಅಭಿಯಂತರರುರವರಲ್ಲಿ ಕೋರಿದರು.

ನೋಡಲ್ ಅಧಿಕಾರಿ ರವರು ಮಾತನಾಡಿ, ಟ್ರಯಾಜ್ ರೂಂಗೆ ಒದಗಿಸಿರುವ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ, ಬಿಲ್ ಪಾವತಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ, ಸಕ್ಷಮ ಪ್ರಾಧಿಕಾರಕ್ಕೆ ಅನುಮೋದನೆಗೆ ಸಲ್ಲಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಿದರು.

- <u>ವಿಷಯ ಸಂಖ್ಯೆ: 3:–</u> ವಾರ್ಡ್ 70ರ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ರಸ್ತೆ ಬದಿಯ ಚರಂಡಿಗಳಲ್ಲಿ ಸಿಲ್ಟ್ ತುಂಬಿರುವ ವಿಷಯವಾಗಿ ದೂರುಗಳು ಬಂದಿರುವ ಬಗ್ಗೆ.

ನೋಡಲ್ ಅಧಿಕಾರಿ ರವರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ರಸ್ತೆ ಬದಿಯ ಚರಂಡಿಗಳಲ್ಲಿ ಸಿಲ್ಟ್ ತುಂಬಿರುವ ವಿಷಯವಾಗಿ ದೂರುಗಳು ಬಂದಿದ್ದು, ರಸ್ತೆ ಬದಿ ಚರಂಡಿಯಲ್ಲಿನ ಸಿಲ್ಟನ್ನು ತೆರವುಗೊಳಿಸಲು ಸಹಾಯಕ ಅಭಿಯಂತರರಿಗೆ ಸೂಚಿಸಿದರು.

ಸಹಾಯಕ ಅಭಿಯಂತರರು ಮಾತನಾಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 2021–22ನೇ ಸಾಲಿನ ಆಯವ್ಯಯದಲ್ಲಿ ನಿರ್ವಹಣೆ ಮತ್ತು ಅಭಿವೃದ್ಧಿಯ ಹೊಸ ಕಾಮಗಾರಿಗಳಿಗೆ ವಾರ್ಡ್ 70ಕ್ಕೆ ಮೀಸಲಿಟ್ಟಿರುವ ಅನುದಾನದಲ್ಲಿ ರೂ.20.00 ಲಕ್ಷಗಳು & ರೂ 15.25 ಲಕ್ಷಗಳನ್ನು ಸಿಲ್ಟ್ ಕಾಮಗಾರಿಗಳನ್ನು ನಿರ್ವಹಿಸಲು ಕ್ರಿಯಾ

ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗಿದೆ ಹಾಗೂ ರೂ.15.00 ಲಕ್ಷಗಳಿಗೆ ಸಿಲ್ಟ್ & ಟ್ರ್ಯಾಕ್ಟರ್ ಕಾಮಗಾರಿಗೆ ಈಗಾಗಲೇ ಕಾರ್ಯಪಾಲಕ ಅಭಿಯಂತರರು, ದಾಸರಹಳ್ಳಿ ವಿಭಾಗ ಕಛೇರಿಯಲ್ಲಿ ಟೆಂಡರ್ ಆಹ್ವಾನಿಸಿದ್ದು, ಕಾರ್ಯಾದೇಶ ನೀಡಿದ ನಂತರ ರಸ್ತೆ ಬದಿ ಚರಂಡಿಯಲ್ಲಿನ ಸಿಲ್ಟನ್ನು ತೆರವುಗೊಳಿಸಲಾಗುವುದು ಎಂದು ಸಭೆಗೆ ತಿಳಿಸಿದರು.

- **ವಿಷಯ ಸಂಖ್ಯೆ: 4:– ವಾರ್ಡ್ 70ರ ವ್ಯಾಪ್ತಿಯ ಕೋವಿಡ್–19 ಬಗ್ಗೆ**

ವೈದ್ಯಾಧಿಕಾರಿಗಳಾದ ಡಾ.ನಿಹಾಲ್ ಅಬ್ಬಾಸ್ ರವರು ಮಾತನಾಡಿ ಸರ್ಕಾರಿ ಶಾಲೆ, ಹೆಗ್ಗನಹಳ್ಳಿಯಲ್ಲಿದ್ದ ಟ್ರಿಯಾಜ್ ಸೆಂಟರ್ ಪ್ರಾಥಮಿಕ ಆರೋಗ್ಯ ಕೇಂದ್ರ, ರಾಜಗೋಪಾಲನಗರಕ್ಕೆ ಸ್ಥಳಾಂತರಿಸಲಾಗಿದೆ ಎಂದು ತಿಳಿಸಿದರು ಹಾಗೂ ರಾಮಯ್ಯ ಬಡಾವಣೆ, ಬಸಪ್ಪನಕಟ್ಟೆ ಹಾಗೂ ಇನ್ನಿತರೆ ಸ್ಥಳಗಳಲ್ಲಿನ ನಿವಾಸಿಗಳಿಗೆ ಕೋವಿಡ್ ಲಸಿಕೆ ನೀಡಲು ಉದ್ದೇಶಿಸಿದ್ದು, ಈ ವಿಷಯವಾಗಿ ಘನ ತ್ಯಾಜ್ಯ ಆಟೋ ಟಿಪ್ಪರ್‌ಗಳ ಮೂಲಕ ಪ್ರಚಾರ ನೀಡಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲು ನೋಡಲ್ ಅಧಿಕಾರಿಯವರನ್ನು ಕೋರಿದರು.

ನೋಡಲ್ ಅಧಿಕಾರಿ ರವರು ಮಾತನಾಡಿ, ಕೋವಿಡ್ ಲಸಿಕೆ ನೀಡಲು ಉದ್ದೇಶಿಸಿರುವ ಸ್ಥಳಗಳಲ್ಲಿ ಘನ ತ್ಯಾಜ್ಯ ಆಟೋ ಟಿಪ್ಪರ್‌ಗಳ ಮೂಲಕ ಪ್ರಚಾರ ನೀಡಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

ವೈದ್ಯಾಧಿಕಾರಿಗಳು ಕೋವಿಡ್–19 ಪ್ರಕರಣಗಳಿಗೆ ಸಂಬಂಧಪಟ್ಟ ವಿವರಗಳನ್ನು ಈ ಕೆಳಕಂಡಂತೆ ಸಭೆಗೆ ತಿಳಿಸಿದರು.

ಒಟ್ಟು ಕೋವಿಡ್–19 ಪಾಸಿಟಿವ್ ಪ್ರಕರಣಗಳು – 1516

ಒಟ್ಟು ಸಾವು – 04

ಒಟ್ಟು ಸಕ್ರಿಯ ಕೋವಿಡ್–19 ಪಾಸಿಟಿವ್ ಪ್ರಕರಣಗಳು – 04 (4 ಮಂದಿಯೂ ಹೋಮ್ ಐಸೋಲೇಷನ್‌ನಲ್ಲಿರುತ್ತಾರೆ)

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| (signature) | Hkamala. 14-9-2021 |
| **ಸದಸ್ಯ ಕಾರ್ಯದರ್ಶಿ** | **ವಾರ್ಡ್ ಸಮಿತಿ ಅಧ್ಯಕ್ಷರು** |
| **ಹಾಗೂ ಸಹಾಯಕ ಅಭಿಯಂತರರು** | **ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ** |
| **ವಾರ್ಡ್ 70, ರಾಜಗೋಪಾಲ ನಗರ** | **ವಾರ್ಡ್ ನಂ.70, ರಾಜಗೋಪಾಲ ನಗರ** |
| **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ